Bangalore
Regional News
26.08.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹೈಕೋರ್ಟ್‌ಗಳು ತೀರ್ಪು ಪ್ರಕಟಿಸುವಲ್ಲಿ ವಿಳಂಬ; ಸರ್ವೋಚ್ಛ ನ್ಯಾಯಾಲಯ ಕಳವಳ

2. ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ್ದಕ್ಕೆ ಪಕ್ಷದ ನಾಯಕರ, ಕಾರ್ಯಕರ್ತರ ಕ್ಷಮೆ ಕೇಳಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

3. ಮೈಸೂರಿನಲ್ಲಿ ವಿಶ್ವ ವಿಖ್ಯಾತ ನಾಡಹಬ್ಬಕ್ಕೆ ದಿನಗಣನೆ; ಎರಡನೇ ತಂಡದ ಗಜಪಡೆಗೆ ತೂಕ ಪರೀಕ್ಷೆ

4. ಧರ್ಮಸ್ಥಳ ಪ್ರಕರಣದಲ್ಲಿ ಆರೋಪಿ ಚಿನ್ನಯ್ಯಗೆ ಆಶ್ರಯ ನೀಡಿದ ಹಿನ್ನೆಲೆ; ಎಸ್‌ಐಟಿ ಅಧಿಕಾರಿಗಳಿಂದ ಪರಿಶೀಲನೆ

5. ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಟೂರ್ನಿ; ಕ್ವಾಲಿಫೈಯರ್ ಪಂದ್ಯದಲ್ಲಿಂದು ಮಂಗಳೂರು ಡ್ರ್ಯಾಗನ್ಸ್-ಹುಬ್ಬಳ್ಳಿ ಟೈಗರ್ಸ್ ಮುಖಾಮುಖಿ

**********

ದೇಶದ ಹೈಕೋರ್ಟ್‌ಗಳು ತೀರ್ಪು ಪ್ರಕಟಿಸುವಲ್ಲಿ ವಿಳಂಬ ಮಾಡುತ್ತಿರುವುದಕ್ಕೆ ಸುಪ್ರೀಂಕೋರ್ಟ್ ಕಳವಳ ವ್ಯಕ್ತಪಡಿಸಿದೆ. ಇದು ನ್ಯಾಯಾಂಗ ಪ್ರಕ್ರಿಯೆಯಲ್ಲಿ ಅರ್ಜಿದಾರರ ನಂಬಿಕೆಯನ್ನು ಕುಗ್ಗಿಸುತ್ತದೆ ಎಂದು ಎಚ್ಚರಿಕೆ ನೀಡಿದೆ. ತೀರ್ಪು ಕಾಯ್ದಿರಿಸಿದ ಮೂರು ತಿಂಗಳೊಳಗೆ ತೀರ್ಪು ನೀಡದಿದ್ದರೆ ರಿಜಿಸ್ಟ್ರಾರ್ ಜನರಲ್ ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರ ಮುಂದೆ ಪ್ರಕರಣವನ್ನು ಇಡಬೇಕು ಹಾಗೂ ಎರಡು ವಾರಗಳಲ್ಲಿ ಅದನ್ನು ಪ್ರಕಟಿಸಲು ಸಂಬಂಧಪಟ್ಟ ಪೀಠಗಳು ನಿರ್ಧರಿಸಬೇಕು ಎಂದು ನ್ಯಾಯಮೂರ್ತಿ ಸಂಜಯ್ ಕರೋಲ್ ಮತ್ತು ಪ್ರಶಾಂತ್ ಕುಮಾರ್ ಮಿಶ್ರಾ ಅವರಿದ್ದ ಪೀಠ ಪುನರುಚ್ಚರಿಸಿದೆ.

**********

ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ್ದಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕ್ಷಮೆಯಾಚಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಎಲ್ಲಾ ಕಾಂಗ್ರೆಸ್ ನಾಯಕರ, ಕಾರ್ಯಕರ್ತರ ಹಾಗೂ ಇಂಡಿ ಒಕ್ಕೂಟದ ನಾಯಕರ ಕ್ಷಮೆಯಾಚಿಸುವುದಾಗಿ ತಿಳಿಸಿದ್ದಾರೆ. ನಾನು ಕಾಂಗ್ರೆಸ್ ಪಕ್ಷದಲ್ಲಿದ್ದೇನೆ ನಿಜ. ಹಾಗೆಂದು ಧರ್ಮ ಬಿಡಲ್ಲ. ತಮ್ಮ ಧರ್ಮದ ಜತೆಗೆ ಇತರ ಧರ್ಮಗಳ ಬಗ್ಗೆಯೂ ನನಗೆ ನಂಬಿಕೆ ಇದೆ. ಮುಸ್ಲಿಂ, ಕ್ರಿಶ್ಚಿಯನ್ ಇತರ ಧರ್ಮಗಳ ಬಗ್ಗೆಯೂ ಗೌರವ ಇದೆ. ಆದರೆ, ಇವೆಲ್ಲದಕ್ಕಿಂತಲೂ ಮಾನವ ಧರ್ಮದ ಮೇಲೆ ನಾನು ಹೆಚ್ಚು ನಂಬಿಕೆ ಇಟ್ಟಿದ್ದೇನೆ ಎಂದು ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

**********

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಮೈಸೂರಿಗೆ ಆಗಮಿಸಿರುವ ಎರಡನೇ ತಂಡದ ಗಜಪಡೆಗೆ ಇಂದು ತೂಕ ಪರೀಕ್ಷೆ ನಡೆಸಲಾಯಿತು. ಮೈಸೂರು ನಗರದ ಧನ್ವಂತ್ರಿ ರಸ್ತೆಯಲ್ಲಿರುವ ಸಾಯಿರಾಮ್ ತೂಕ ಮಾಪನ ಕೇಂದ್ರದಲ್ಲಿ ನಡೆದ ಆನೆಗಳ ತೂಕ ಪರಿಶೀಲನೆಯಲ್ಲಿ ಹೇಮಾವತಿ ೨ ಸಾವಿರದ ೪೪೦ ಕೆಜಿ, ಶ್ರೀಕಂಠ ೫ ಸಾವಿರದ ೫೪೦ ಕೆಜಿ, ಸುಗ್ರೀವ ೫ ಸಾವಿರದ ೫೪೫ ಕೆಜಿ, ರೂಪ ೩ ಸಾವಿರದ ೩೨೦ ಕೆಜಿ ಹಾಗೂ ಗೋಪಿ ೪ ಸಾವಿರದ ೯೯೦ ಕೆಜಿ ತೂಕವಿದೆ. ದಸರಾ ಗಜಪಡೆಗಳು ಜಂಬೂಸವಾರಿ ಮೆರವಣಿಗೆಗೆ ಅರಮನೆಯಿಂದ ಬನ್ನಿಮಂಟಪದವರೆಗೆ ದಿನಕ್ಕೆ ಎರಡು ಬಾರಿ ತಾಲೀಮು ನಡೆಸಲಾಗುತ್ತದೆ. ಸದ್ದುಗದ್ದಲಕ್ಕೆ ವಿಚಲಿತವಾಗದಂತೆ ಎಲ್ಲಾ ಆನೆಗಳಿಗೆ ತರಬೇತಿ ನೀಡಲಾಗುತ್ತಿದೆ.

**********

ಜನ ಸಂದಣಿ ಇರುವ ಪ್ರದೇಶಗಳಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ತಡೆಯಲು ಪ್ರಮಾಣಿತ ಕಾರ್ಯಾಚರಣೆ ವಿಧಾನವನ್ನು ಎಲ್ಲಾ ಇಲಾಖೆಯ ಅಧಿಕಾರಿಗಳು ಪಾಲಿಸುವಂತೆ ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಸೂಚಿಸಿದ್ದಾರೆ. ದಸರಾ ಆಚರಣೆ ಯುವ ಸಂಭ್ರಮ, ಯುವ ದಸರಾ, ಅರಮನೆ ಕಾರ್ಯಕ್ರಮಗಳು, ವಸ್ತು ಪ್ರದರ್ಶನ ಆವರಣದಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಜನ ಸೇರಲಿದ್ದಾರೆ. ಈ ಪ್ರದೇಶಗಳಲ್ಲಿ ಹೆಚ್ಚಿನ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**********

ಧರ್ಮಸ್ಥಳ ಗ್ರಾಮದಲ್ಲಿ ಹಲವಾರು ಮೃತದೇಹಗಳನ್ನು ಹೂತು ಹಾಕಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ದಳ ಬಂಧಿಸಿರುವ ಆರೋಪಿ ಚಿನ್ನಯ್ಯಗೆ ಆಶ್ರಯ ನೀಡಿದ ಆರೋಪದಲ್ಲಿ ಉಜಿರೆಯ ಮಹೇಶ್ ಶೆಟ್ಟಿ ತಿಮರೋಡಿ ನಿವಾಸದ ಮೇಲೆ ಎಸ್ ಐಟಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ತಿಮರೋಡಿ ಸಹೋದರ ಮೋಹನ್ ಶೆಟ್ಟಿ ನಿವಾಸಕ್ಕೂ ದಾಳಿ ನಡೆಸಲಾಗಿದೆ. ಎಸ್.ಐ.ಟಿ ತನಿಖಾಧಿಕಾರಿ ಜಿತೇಂದ್ರ ಕುಮಾರ್ ದಯಾಮ ನೇತೃತ್ವದಲ್ಲಿ ಅಧಿಕಾರಿಗಳ ತಂಡ ಬೆಳ್ತಂಗಡಿ ನ್ಯಾಯಾಲಯದಿಂದ ಸರ್ಚ್ ವಾರಂಟ್ ಪಡೆದುಕೊಂಡಿತ್ತು. ಆರೋಪಿ ಚಿನ್ನಯ್ಯಗೆ ಉಜಿರೆಯ ನಿವಾಸದಲ್ಲಿ ಮಹೇಶ್ ಶೆಟ್ಟಿ ತಿಮರೋಡಿ ಕಳೆದ ಎರಡು ತಿಂಗಳಿಂದ ಅಶ್ರಯ ನೀಡಿದ್ದರು.

**********

ತುಂಗಭದ್ರ ಆರತಿ ಮಹೋತ್ಸವ ಮತ್ತು ಬಾಗಿನ ಸಮರ್ಪಣೆ ಕಾರ್ಯಕ್ರಮವನ್ನು ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹುಲಿಗಿಯ ತುಂಗಭದ್ರಾ ನದಿತೀರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಸೇರಿದಂತೆ ಕೊಪ್ಪಳ ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಕೊಪ್ಪಳ ಸಂಸದ ರಾಜಶೇಖರ ಬಸವರಾಜ ಹಿಟ್ನಾಳ ತಿಳಿಸಿದ್ದಾರೆ.

**********

ರಾಜ್ಯದೆಲ್ಲೆಡೆ ಗೌರಿ-ಗಣೇಶ ಹಬ್ಬದ ಸಂಭ್ರಮ ಮನೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಗಣ್ಯರು ಗೌರಿ ಗಣೇಶ ಹಬ್ಬದ ಶುಭಾಶಯ ಕೋರಿದ್ದಾರೆ. ಜಲಚರಗಳಿಗೆ, ಪರಿಸರಕ್ಕೆ ಹಾನಿಕಾರಕವಾದ ಗಣೇಶ ಮೂರ್ತಿಯ ಬದಲಿಗೆ ಮಣ್ಣಿನಿಂದ ಮಾಡಿದ ಪರಿಸರಸ್ನೇಹಿ ಗಣೇಶನನ್ನು ಪೂಜಿಸೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ರಾಜಧಾನಿ ಬೆಂಗಳೂರಿನಲ್ಲೂ ಗೌರಿ-ಗಣೇಶ ಹಬ್ಬದ ಸಂಭ್ರಮ ಮನೆ ಮಾಡಿದೆ. ಗೌರಿ ಹಾಗೂ ಗಣೇಶನ ಮೂರ್ತಿ ಜತೆಗೆ ಜನರು ಹೂವು-ಹಣ್ಣು ಖರೀದಿಯಲ್ಲಿ ನಿರತರಾಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗೌರಿ ಗಣೇಶ ಹಬ್ಬದ ಅಂಗವಾಗಿ ಇಂದು ಸ್ವರ್ಣಗೌರಿ ವ್ರತವನ್ನು ಜನತೆ ಶ್ರದ್ಧಾಭಕ್ತಿ ಸಂಭ್ರಮಗಳಿಂದ ಆಚರಿಸುತ್ತಿದ್ದಾರೆ. ದೇವಾಲಯಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ.ಗೌರಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ, ಸುಮಂಗಲಿಯರಿಗೆ ಬಾಗಿನ ನೀಡುವುದು ಹಬ್ಬದ ಪ್ರಮುಖ ಆಚರಣೆಯಾಗಿದೆ. ನಾಳಿನ ಗಣೇಶ ಚತುರ್ಥಿಗೆ ಸಿದ್ದತೆಗಳು ನಡೆಯುತ್ತಿದ್ದು, ಖರೀದಿ ಭರಾಟೆ

ಜೋರಾಗಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಇಂದು ಸ್ವರ್ಣ ಗೌರಿ ವ್ರತವನ್ನು ಶ್ರದ್ಧ ಭಕ್ತಿಯಿಂದ ಆಚರಣೆ ಮಾಡಲಾಗುತ್ತಿದೆ. ಹಬ್ಬದ ನಿಮಿತ್ತ ಮಾರುಕಟ್ಟೆಗಳಲ್ಲಿ ಹೂವು ಹಣ್ಣು, ಗಣೇಶನ ವಿಗ್ರಹಗಳ ಮರಾಟ ಭರದಿಂದ ಸಾಗಿದೆ. ಮಹಿಳೆಯರು ಮುಂಜಾನೆಯೆ ನೀರಿನ ಕೊಳ್ಳ, ಹಳ್ಳಗಳಿಗೆ ತೆರಳಿ ಗಂಗೆ ಪೂಜೆ ಸಲ್ಲಿಸುವ ಮೂಲಕ ಗೌರಿ ಪೂಜೆ ಮಾಡುವುದು ವಿಶೇಷವಾಗಿದೆ. ಗೌರಿ, ಗಣೇಶ ಹಬ್ಬದ ಅಂಗವಾಗಿ ಯಾದಗಿರಿಯಲ್ಲಿ ನಾಳೆ ಗಣೇಶ ಮೂರ್ತಿ ಪ್ರತಿಷ್ಠಾಪನೆ ಆಗುವುದರಿಂದ ಹಿಡಿದು ವಿಸರ್ಜನೆ ಆಗುವವರೆಗೂ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮೈಸೂರಿನಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸ್ವರ್ಣಗೌರಿ ಹಾಗೂ ಗಣೇಶ ಚತುರ್ಥಿ ಹಬ್ಬದ ಆಚರಣೆಯನ್ನು ಪರಿಸರ ಪೂರಕ ನಿಟ್ಟಿನಲ್ಲಿ ಆಚರಿಸುವ ಸಲುವಾಗಿ, ಗೌರಿ ಮತ್ತು ಗಣೇಶ ಮೂರ್ತಿಗಳನ್ನು ವಿಸರ್ಜಿಸಲು ಸಂಚಾರಿ ವಿಸರ್ಜನಾ ತೊಟ್ಟಿಗಳ ವ್ಯವಸ್ಥೆ ಮಾಡಲಾಗಿದೆ. ಗೌರಿ ಗಣೇಶ ಹಬ್ಬವನ್ನು ಇಂದು ಮತ್ತು ನಾಳೆ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಸಡಗರ ಸಂಭ್ರಮಗಳಿಂದ ಆಚರಿಸಲಾಗುತ್ತಿದೆ. ಪರಿಸರ ಸ್ನೇಹಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಶಾಂತಿ, ಸೌಹಾರ್ದತೆ ಮತ್ತು ಭಕ್ತಿ ಭಾವಗಳಿಂದ ಹಬ್ಬ ಆಚರಿಸಬೇಕೆಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

**********

ರಾಜ್ಯದ ವಿವಿಧೆಡೆ ಹಗುರವಾಗಿ ಮಳೆಯಾಗಿದೆ. ಬಂಗಾಳ ಕೊಲ್ಲಿಯ ಉತ್ತರ ಭಾಗದಲ್ಲಿ ವಾಯುಭಾರ ಕುಸಿತವಾಗಿದ್ದು ಇದರ ಪ್ರಭಾವದಿಂದಾಗಿ ಕರಾವಳಿ ಜಿಲ್ಲೆಯಲ್ಲಿ ಇಂದಿನಿಂದ ಸೆಪ್ಟಂಬರ್ ೧ರವರೆಗೆ ವ್ಯಾಪಕವಾಗಿ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಉತ್ತರ ಹಾಗೂ ದಕ್ಷಿಣ ಕನ್ನಡ ಒಳನಾಡಿನ ಜಿಲ್ಲೆಯ ಹಲವೆಡೆ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

*********

ಮೈಸೂರಿನಲ್ಲಿ ಮಹಾರಾಜ ಟ್ರೋಫಿ ಟಿ೨೦ ಕ್ರಿಕೆಟ್ ಟೂರ್ನಿಯ ಲೀಗ್ ಹಂತದ ಪಂದ್ಯಗಳು ಮುಕ್ತಾಯಗೊಂಡಿದ್ದು ಇಂದಿನಿಂದ ಪ್ಲೇ ಆಫ್ ಪಂದ್ಯಗಳು ನಡೆಯಲಿವೆ. ಅಪರಾಹ್ನ ೩.೧೫ಕ್ಕೆ ನಡೆಯುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಮಂಗಳೂರು ಡ್ರ್ಯಾಗನ್ಸ್ ಹಾಗೂ ಹುಬ್ಬಳ್ಳಿ ಟೈಗರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಬಳಿಕ ಸಂಜೆ ೭.೧೫ಕ್ಕೆ ನಡೆಯುವ ಎಲಿಮಿನೇಟರ್ ಪಂದ್ಯದಲ್ಲಿ ಬೆಂಗಳೂರು ಬ್ಲಾಸ್ಟರ್ಸ್ ಹಾಗೂ ಗುಲ್ಬರ್ಗ ಮಿಸ್ಟಿಕ್ಸ್ ತಂಡಗಳು ಮುಖಾಮುಖಿಯಾಗಲಿವೆ.